**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು**

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ, 2000 ಕರ್ನಾಟಕ ಸ್ಟ್ಯಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ಅನುಬಂಧ (iv) ರಲ್ಲಿ ವಿಧೇಯಕವನ್ನು ಮಂಡಿಸಲಾಗಿದೆ.

**(iv) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2000)**

**ಮಂಡನೆಗೆ ಅನುಮತಿ ಕೋರಿಕೆ**

ಶ್ರೀ ಸಿ.ಆರ್.ಸಗೀರ್ ಅಹ್ಮದ್ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, 2000ದ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ದ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು**

ಶ್ರೀ ಸಿ.ಆರ್.ಸಗೀರ್ ಅಹ್ಮದ್ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, "2000ದ ಸಾಲಿನ ಕರ್ನಾಟಕ ಮೋಟಾರು ವಾಹವಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ಅನುಬಂಧ iv ಮತ್ತು v ರಲ್ಲಿ ವಿಧೇಯಕವನ್ನು ಮಂಡಿಸಲಾಗಿದೆ.

**(i) ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ, 2000**

**ಪರ್ಯಾಲೋಚನಾ ಪ್ರಸ್ತಾವ**

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥಸಚಿವರು) : ಮಾನ್ಯ ಅಧ್ಯಕ್ಷರೆ, 2000ದ ಸಾಲಿನ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

**ಪ್ರಸ್ತಾವನ್ನು ಮಂಡಿಸಲಾಯಿತು**

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2000ದ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2 ಮತ್ತು 3**

ಅಧ್ಯಕ್ಷರು : ಖಂಡ 2 ರಿಂದ 3ವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತವೆ.

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು**

(ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.)

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವ ಅಂಗೀಕಾರ**

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ 2000 ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, 2000ದ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

**(ii) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ, 2000**

**ಪರ್ಯಾಲೋಚನಾ ಪ್ರಸ್ತಾವ**

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ, 2000ದ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

**ಪ್ರಸ್ತಾವನೆಯನ್ನು ಮಂಡಿಸಲಾಯಿತು**

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2000ದ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು**